ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿರಸ್ತೆ,
ಬೆಂಗಳೂರು, ದಿನಾಂಕ:01.01.2022.

ಸಂಖ್ಯೆ: ಕಾಶಿಇ/ಶೈವಿ/99/ಯುವ ಸಮೀಕ್ಷೆ/2021-22

## ಸುತ್ತೋಲೆ

ವಿಷಯ: ಕಾಲೇಜು ವಿದ್ಯಾರ್ಥಿಗಳು ಯುವ ನೀತಿ ಸಮೀಕ್ಷೆ ಅಭಿಯಾನದಲ್ಲಿ ಪಾಲ್ಗೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಯುಸಕ್ರೀ 212 ಅಮುಕಾ 2021 ದಿನಾಂಕ:18.12.2021.

* * * * * *

ಕರ್ನಾಟಕ ರಾಜ್ಯ ಸರ್ಕಾರವು ಇಂದಿನ ಯುವ ಜನತೆ ಎದುರಿಸುತ್ತಿರುವ ನಾನಾ ರೀತಿಯ ಸಮಸ್ಯೆಗಳನ್ನು ಒಳಗೊಂಡ, ಸಮಗ್ರವಾದ ಯುವ ನೀತಿಯನ್ನು ರೂಪಿಸಲು ಚಾಲನೆ ನೀಡಿದ್ದು, ಈ ಸಂಬಂಧ, ಕರ್ನಾಟಕ ಯುವ ನೀತಿ – 2021ನ್ನು ರೂಪಿಸಲು ತಜ್ಞರ ಸಮಿತಿಯನ್ನು ರಚನೆ ಮಾಡಲಾಗಿದ್ದು, ಸದರಿ ಸಮಿತಿಯು ತನ್ನ ವರದಿಯನ್ನು ನೀಡಲು ಅನುವಾಗುವಂತೆ ಹಾಗೂ ಎಲ್ಲಾ ಮಾಹಿತಿಗಳನ್ನು ಖುದ್ದಾಗಿ ಯುವ ಜನತೆಯಿಂದಲೇ ತಿಳಿದುಕೊಳ್ಳುವ ಸಲುವಾಗಿ **'ಯುವ ನೀತಿ ಸಮೀಕ್ಷೆ'** ಎಂಬ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಈ ಸಂಬಂಧ 43 ಅಂಶಗಳ ಪ್ರಶ್ನಾವಳಿ ಪಟ್ಟಿಯನ್ನು ತಯಾರಿಸಲಾಗಿದ್ದು, ಈ ಸಮೀಕ್ಷೆಯಲ್ಲಿ ನಾಡಿನ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅವರ ಅಮೂಲ್ಯ ಸಲಹೆ / ಅಭಿಪ್ರಾಯವನ್ನು ಸಂಗ್ರಹಿಸಲು ಮುಕ್ತ ಆಹ್ವಾನ ನೀಡಲಾಗಿದೆ.

ಈ ನಿಟ್ಟಿನಲ್ಲಿ ಕನ್ನಡ ಮತ್ತು ಆಂಗ್ಲ ಪ್ರಶ್ನಾವಳಿ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ. ತತ್ಸಂಬಂಧ, ಸದರಿ ಪ್ರಶ್ನಾವಳಿಗಳ ಮೂಲಕ ಯುವ ಜನತೆಯ ಅಮೂಲ್ಯ ಸಲಹೆ / ಅಭಿಪ್ರಾಯಗಳು ಸಮಿತಿಗೆ ತಲುಪಲು ಅನುಕೂಲವಾಗುವ ಸಲುವಾಗಿ, ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ವಿದ್ಯಾರ್ಥಿಗಳು ಈ ಕೆಳಕಂಡ ಲಿಂಕ್‌ಗಳಲ್ಲಿ ಆನ್‌ಲೈನ್ ಮೂಲಕ ದಿನಾಂಕ:08.01.2022ರೊಳಗಾಗಿ ಭರ್ತಿ ಮಾಡುವಂತೆ ಕಾಲೇಜಿನ ಪ್ರಾಂಶುಪಾಲರುಗಳು ಹಾಗೂ ಅಧ್ಯಾಪಕರುಗಳು ವೈಯುಕ್ತಿಕ ಗಮನಹರಿಸುವಂತೆ ಸೂಚಿಸಲಾಗಿದೆ. ಮಾಹಿತಿಯನ್ನು ಹಾಗೂ ಭರ್ತಿ ಮಾಡಿದ ವಿದ್ಯಾರ್ಥಿಗಳ ಕ್ರೋಢೀಕೃತ ಸಂಖ್ಯೆಯನ್ನು ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

https://www.surveymonkey.com/r/WC6DRB2 (ಕನ್ನಡ) ಅಥವಾ

https://www.surveymonkey.com/r/N6K325J (ಇಂಗ್ಲೀಷ್)

ಅಡಕ: ಕರ್ನಾಟಕ ಯುವ ನೀತಿ ಸಮೀಕ್ಷೆ, 2021

(ಆಯುಕ್ತರ ಆದೇಶದ ಮೇರೆಗೆ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

..2

2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ. – ತಮ್ಮ ವ್ಯಾಪ್ತಿಯ ಕಾಲೇಜುಗಳೊಂದಿಗೆ ಸಮನ್ವಯ ಸಾಧಿಸಿ, ಜಿಲ್ಲಾವಾರು ವರದಿಯನ್ನು ಕ್ರೋಡೀಕರಿಸಿ ಮಾಹಿತಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳ ಶಾಖೆಗೆ, ಕೊಠಡಿ ಸಂಖ್ಯೆ: 242 2ನೇ ಮಹಡಿ, ವಿಕಾಸಸೌಧ, ಬೆಂಗಳೂರು – 560 001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಶಾಖೆಗೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, 2ನೇ ಮಹಡಿ, 2ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು–560 001.
4. ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತಶಾಖೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – 560 001.
5. ಕಛೇರಿ ಪ್ರತಿ.